**All India Radio: Bangalore**
**National Bulletin In Kannada**
**21.05.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಅಮೃತ್ ಭಾರತ ಯೋಜನೆ : ಪ್ರಧಾನಿ ನರೇಂದ್ರ ಮೋದಿ ಅವರಿಂದ ನಾಳೆ ಕರ್ನಾಟಕದ ೫ ಸೇರಿದಂತೆ ದೇಶದ ೧೦೩ ರೈಲು ನಿಲ್ದಾಣಗಳ ಲೋಕಾರ್ಪಣೆ
2. ಛತ್ತೀಸ್‌ಗಢದಲ್ಲಿ ನಕ್ಸಲ್ ಕಾರ್ಯಾಚರಣೆ : ನಕ್ಸಲ್ ನಾಯಕ ಕೇಶವ ರಾವ್ ಸೇರಿ ೨೭ ಮಾವೋವಾದಿಗಳು ಹತ
3. ನ್ಯಾಷನಲ್ ಹೆರಾಲ್ಡ್ ಪ್ರಕರಣ : ಅಕ್ರಮ ಹಣ ವರ್ಗಾವಣೆಯಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾಗಾಂಧಿ, ರಾಹುಲ್ ಗಾಂಧಿ ಭಾಗಿ - ಇಡಿ ಆರೋಪ
4. ಐಪಿಎಲ್ ಟಿ-೨೦ ಕ್ರಿಕೆಟ್ : ಮುಂಬೈ ಇಂಡಿಯನ್ಸ್ ವಿರುದ್ಧ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ

<><><><>

ಅಮೃತ  ಭಾರತ ರೈಲ್ವೆ ನಿಲ್ದಾಣ ಯೋಜನೆಯಡಿ ಮೊದಲ ಹಂತದಲ್ಲಿ ೫೦೦ ರೈಲ್ವೆ ನಿಲ್ದಾಣಗಳ ನವೀಕರಣ ಕಾಮಗಾರಿ ಆರಂಭವಾಗಿದ್ದು, ಸದ್ಯ ಕಾಮಗಾರಿ ಪೂರ್ಣಗೊಂಡ ಕರ್ನಾಟಕದ ೫ ರೈಲ್ವೆ ನಿಲ್ದಾಣಗಳು ಸೇರಿದಂತೆ ದೇಶದ ೧೦೩ ರೈಲ್ವೆ ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ, ನಾಳೆ ವರ್ಚುವಲ್ ಮೂಲಕ ಲೋಕಾರ್ಪಣೆ ಮಾಡಲಿದ್ದಾರೆ. ನೈರುತ್ಯ ರೈಲ್ವೆ ವಲಯದ ೫ ನಿಲ್ದಾಣಗಳು ನವೀಕರಣಗೊಂಡಿದ್ದು, ಗೋಕಾಕ,  ಧಾರವಾಡ, ಮುನಿರಾಬಾದ್, ಗದಗ, ಬಾಗಲಕೋಟ ರೈಲು ನಿಲ್ದಾಣಗಳು ಇದರಲ್ಲಿ ಸೇರಿವೆ. ಆಧುನೀಕರಣಗೊಂಡ ಈ ರೈಲು ನಿಲ್ದಾಣಗಳು ಪ್ರಾದೇಶಿಕ ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುತ್ತದೆ. ವಿಸ್ತರಾವಾದ ರಸ್ತೆಗಳು, ಉತ್ತಮವಾಗಿ ನಿರ್ಮಿಸಲಾದ ಕೆಳಸೇತುವೆಗಳು, ಪಾದಚಾರಿ ಮೇಲ್ಸೇತುವೆಗಳು, ಆಧುನಿಕ ವಿಶ್ರಾಂತಿ ಕೊಠಡಿಗಳು, ವಿಶಾಲ ಸಂಚಾರ ಪ್ರದೇಶ, ಭವ್ಯವಾದ ಮುಖಮಂಟಪ ಮತ್ತು ಲಿಫ್ಟ್‌ಗಳನ್ನು ಈ ನಿಲ್ದಾಣಗಳು ಹೊಂದಿವೆ. ಈ ರೈಲು ನಿಲ್ದಾಣಗಳನ್ನು ದಿವ್ಯಾಂಗ ಸ್ನೇಹಿಯಾಗಿ ವಿನ್ಯಾಸಗೊಳಿಸಲಾಗಿದೆ. ಇವು ಉಚಿತ ವೈ-ಫೈ ಸೇವೆಯನ್ನು ಒದಗಿಸಲಿದೆ. ದೇಶಾದ್ಯಂತ ಈ ರೀತಿಯ ಒಟ್ಟು ೧೦೩ ರೈಲು ನಿಲ್ದಾಣಗಳು ನಾಳೆ ಲೋಕಾರ್ಪಣೆಗೊಳ್ಳಲಿವೆ.

<><><><>

ಛತ್ತೀಸ್‌ಗಢದ ನಾರಾಯಣಪುರದಲ್ಲಿ ಇಂದು ನಡೆದ ಕಾರ್ಯಾಚರಣೆಯಲ್ಲಿ, ಭದ್ರತಾ ಪಡೆಗಳು ನಕ್ಸಲ್ ನಾಯಕ ನಂಬಲ ಕೇಶವ ರಾವ್ ಅಲಿಯಾಸ್ ಬಸವರಾಜು ಸೇರಿದಂತೆ ೨೭ ಮಾವೋವಾದಿಗಳನ್ನು ಹೊಡೆದುರುಳಿಸಿವೆ. ಛತ್ತೀಸ್‌ಗಢದಲ್ಲಿಂದು ನಡೆದ ಮಾವೋವಾದಿಗಳ ವಿರುದ್ಧದ ಕಾರ್ಯಾಚರಣೆಯಲ್ಲಿ ದೇಶದ ಭದ್ರತಾ ಪಡೆಗಳು ಸಾಧಿಸಿದ ಗಮನಾರ್ಹ ಯಶಸ್ಸಿಗೆ ಪ್ರಧಾನಿ ನರೇಂದ್ರ ಮೋದಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ. ನಕ್ಸಲಿಸಂ ಪಿಡುಗನ್ನು ತೊಡೆದುಹಾಕಲು ಹಾಗೂ ದೇಶದ ಜನರಿಗೆ ಶಾಂತಿ ಮತ್ತು ಪ್ರಗತಿಯ ಜೀವನವನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ. ಛತ್ತೀಸ್‌ಗಢದಲ್ಲಿ ಮಾವೋವಾದಿಗಳ ವಿರುದ್ಧದ ಇಂದಿನ ಕಾರ್ಯಾಚರಣೆಯನ್ನು ನಕ್ಸಲಿಸಂ ನಿರ್ಮೂಲನೆ ಹೋರಾಟದಲ್ಲಿ ಒಂದು ಪ್ರಮುಖ ಮೈಲುಗಲ್ಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಶ್ಲಾಘಿಸಿದ್ದಾರೆ.  ಮಾವೋವಾದಿ ಸಂಘಟನೆಯ ಪ್ರಧಾನ ಕಾರ್ಯದರ್ಶಿ ನಂಬಲ ಕೇಶವ ರಾವ್- ನಕ್ಸಲ್ ಚಳುವಳಿಯ ಬೆನ್ನೆಲುಬಾಗಿದ್ದರು.

ನಕ್ಸಲಿಸಂ ವಿರುದ್ಧದ ಭಾರತದ ಮೂರು ದಶಕಗಳ ಯುದ್ಧದಲ್ಲಿ ಇದೇ ಮೊದಲ ಬಾರಿಗೆ ಪ್ರಧಾನ ಕಾರ್ಯದರ್ಶಿ ಶ್ರೇಣಿಯ ನಾಯಕನನ್ನು ಭದ್ರತಾ ಪಡೆಗಳು ಹತ್ಯೆ ಮಾಡಿವೆ ಎಂದು ಅವರು ಹೇಳಿದರು. ಆಪರೇಷನ್ ಬ್ಲಾಕ್ ಫಾರೆಸ್ಟ್ ಪೂರ್ಣಗೊಂಡ ನಂತರ, ಛತ್ತೀಸ್‌ಗಢ, ತೆಲಂಗಾಣ ಮತ್ತು ಮಹಾರಾಷ್ಟ್ರದಲ್ಲಿ ೫೪ ನಕ್ಸಲರನ್ನು ಬಂಧಿಸಲಾಗಿದೆ. ಇದೇ ವೇಳೆ ೮೪ ಮಂದಿ ನಕ್ಸಲರು ಶರಣಾಗಿದ್ದಾರೆ. ೨೦೨೬ ರ ಮಾರ್ಚ್ ೩೧ರ ವೇಳೆಗೆ ದೇಶದಿಂದ ನಕ್ಸಲಿಸಂ ಅನ್ನು ಸಂಪೂರ್ಣ ನಿರ್ಮೂಲನೆ ಮಾಡಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಸಂಕಲ್ಪಿಸಿದೆ ಎಂದು ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಸಚಿವ ಅಮಿತ್ ಶಾ ಹೇಳಿದ್ದಾರೆ.

<><><><>

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರು ಅಕ್ರಮ ಹಣ ವರ್ಗಾವಣೆಯಲ್ಲಿ ಪ್ರಾಥಮಿಕವಾಗಿ ಭಾಗಿಯಾಗಿದ್ದಾರೆ ಎಂದು ಜಾರಿ ನಿರ್ದೇಶನಾಲಯ-ಇಡಿ ಇಂದು ದೆಹಲಿ ನ್ಯಾಯಾಲಯಕ್ಕೆ ತಿಳಿಸಿದೆ. ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ಅವರನ್ನು ಒಳಗೊಂಡ ನ್ಯಾಯಪೀಠದ ಎದುರು ವಾದ ಮಂಡಿಸಿದ ಇಡಿ ಪರ ವಿಶೇಷ ನ್ಯಾಯವಾದಿ ಜೋಹೆಬ್ ಹೊಸೈನ್,  ಸುಮಾರು ೧೪೨ ಕೋಟಿ ರೂಪಾಯಿಗಳನ್ನು ಅಕ್ರಮವಾಗಿ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಪಡೆದಿದ್ದಾರೆ ಎಂದು ಆರೋಪಿಸಿದರು.  ಪ್ರಕರಣಕ್ಕೆ ಸಂಬಂಧಿಸಿದ ೭೫೧.೯ ಕೋಟಿ ರೂಪಾಯಿ ಮೌಲ್ಯದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಇದೇ ವೇಳೆ, ಜುಲೈ ೨ ರಿಂದ ೮ ರವರೆಗೆ ನ್ಯಾಷನಲ್ ಹೆರಾಲ್ಡ್ ಪ್ರಕರಣವನ್ನು ಪ್ರತಿದಿನ ವಿಚಾರಣೆ ನಡೆಸುವುದಾಗಿ ನ್ಯಾಯಾಲಯ ತಿಳಿಸಿದೆ.

<><><><>

ಜೆಡಿಯು ಸಂಸದ ಸಂಜಯ್ ಕುಮಾರ್ ಝಾ ನೇತೃತ್ವದ ನಿಯೋಗ ಜಪಾನ್, ಇಂಡೋನೇಷಿಯಾ, ಮಲೇಷಿಯಾ, ದಕ್ಷಿಣ ಕೊರಿಯಾ, ಸಿಂಗಾಪುರ್ ರಾಷ್ಟ್ರಗಳಿಗೆ ಭೇಟಿ ನೀಡಲಿದ್ದು, ದೆಹಲಿ ವಿಮಾನ ನಿಲ್ದಾಣದಿಂದ ಇಂದು ಬೆಳಗ್ಗೆ ಪ್ರವಾಸ ಆರಂಭಿಸಿತು. ಈ ನಿಯೋಗದಲ್ಲಿ ಬಿಜೆಪಿ ಸಂಸದ ರಾಧಾ ಅಪರಾಜಿತ ಸಾರಂಗಿ, ಬ್ರಿಜ್ ಲಾಲ್, ಪ್ರಧಾನ್ ಬರುವಾ, ಹೇಮಂತ್ ಜೋಷಿ, ಎಐಟಿಸಿ ಸಂಸದ ಯೂಸುಫ್ ಪಠಾಣ್, ಕಾಂಗ್ರೆಸ್ ಸಲ್ಮಾನ್ ಖುರ್ಷಿದ್, ಸಿಪಿಎಂ ನ ಡಾ. ಜಾನ್ ಬ್ರಿಟಾಸ್ ಇದ್ದಾರೆ. ಮತ್ತೊಂದೆಡೆ, ಡಿಎಂಕೆ ಸಂಸದೆ ಕನಿಮೋಳಿ ಕರುಣಾನಿಧಿ ನೇತೃತ್ವದ ನಿಯೋಗ ಸ್ಪೇನ್, ಗ್ರೀಸ್, ಸ್ಲೋವೇನಿಯಾ, ಲಾತ್ವಿಯಾ ಮತ್ತು ರಷ್ಯಾ ದೇಶಗಳಿಗೆ ಭೇಟಿ ನೀಡಲಿದೆ.

ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ ನಿಯೋಗ ಯುಎಇ, ಲೈಬೀರಿಯಾ, ಕಾಂಗೋ ಗಣರಾಜ್ಯ ಮತ್ತು ಸಿಯೆರಾ ಲಿಯೋನ್‌ಗೆ ಭೇಟಿ ನೀಡಲಿದೆ. ಗಡಿಯಾಚೆಗಿನ ಭಯೋತ್ಪಾದನೆ ಮೂಲೋತ್ಪಾಟನೆ ಹಿನ್ನೆಲೆಯಲ್ಲಿ ಕೈಗೊಳ್ಳಲಾದ ಆಪರೇಷನ್ ಸಿಂದೂರ ಕಾರ್ಯಾಚರಣೆಯ ಮಹತ್ವ ಹಾಗೂ ಭಯೋತ್ಪಾದನೆ ವಿರುದ್ಧದ ಶೂನ್ಯ ಸಹಿಷ್ಣುತೆ ಕುರಿತು ಜಗತ್ತಿಗೆ ಪ್ರಬಲ ಸಂದೇಶ ನೀಡುವ ದೃಷ್ಟಿಯಿಂದ ೭ ನಿಯೋಗಗಳನ್ನು ವಿವಿಧ ರಾಷ್ಟ್ರಗಳಿಗೆ ಕಳುಹಿಸಲಾಗುತ್ತಿದೆ.

<><><><>

ಖುಜ್ದಾರ್ ಘಟನೆಯಲ್ಲಿ ಭಾರತದ ಕೈವಾಡವಿದೆ ಎಂಬ ಪಾಕಿಸ್ತಾನದ ಆರೋಪಗಳನ್ನು ಭಾರತ ತಳ್ಳಿಹಾಕಿದೆ. ಈ ಆರೋಪಗಳು ಆಧಾರರಹಿತ ಎಂದು ಭಾರತ ಹೇಳಿದೆ. ಪಾಕಿಸ್ತಾನದ ಆರೋಪಗಳ ಕುರಿತ ಮಾಧ್ಯಮ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದು ಎಂಬ ತನ್ನ ಖ್ಯಾತಿಯಿಂದ ಗಮನವನ್ನು ಬೇರೆಡೆ ಸೆಳೆಯಲು ಮತ್ತು ತನ್ನದೇ ಆದ ಘೋರ ವೈಫಲ್ಯಗಳನ್ನು ಮರೆಮಾಡಲು ಪಾಕಿಸ್ತಾನವು ತನ್ನ

ಎಲ್ಲಾ ಆಂತರಿಕ ಸಮಸ್ಯೆಗಳಿಗೆ ಭಾರತವನ್ನು ದೂಷಿಸುವುದು ಅದರ ಸ್ವಭಾವವಾಗಿದೆ. ಜಗತ್ತನ್ನು ಮೋಸಗೊಳಿಸುವ ಈ ಪ್ರಯತ್ನ ವಿಫಲವಾಗುವುದು ಖಚಿತ ಎಂದು ಹೇಳಿದರು.

ಖುಜ್ದಾರ್‌ನಂತಹ ಎಲ್ಲಾ ಘಟನೆಗಳಲ್ಲಿ ಭಾರತ ಸಂತಾಪ ಸೂಚಿಸುತ್ತಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದರು.

<><><><>

ಮುಂಗಡ ಟಿಪ್ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಉಬರ್ ಸಂಸ್ಥೆಗೆ ನೋಟಿಸ್ ಜಾರಿ ಮಾಡಿದೆ ಮತ್ತು ಈ ಬಗ್ಗೆ ವಿವರಣೆಯನ್ನು ಕೇಳಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ, ಮುಂಗಡ ಟಿಪ್ ಪದ್ಧತಿಯು ತೀವ್ರ ಕಳವಳಕಾರಿಯಾಗಿದೆ ಮತ್ತು ಅಂತಹ ಕ್ರಮಗಳು ಅನ್ಯಾಯದ ವ್ಯಾಪಾರ ಪದ್ಧತಿಗಳ ಅಡಿಯಲ್ಲಿ ಬರುತ್ತವೆ ಎಂದು ಹೇಳಿದ್ದಾರೆ. ಈ ಪದ್ಧತಿಯನ್ನು ಗಮನದಲ್ಲಿಟ್ಟುಕೊಂಡು, ಸಚಿವರು ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ-ಸಿಸಿಪಿಎ ಅನ್ನು ಪರಿಶೀಲಿಸುವಂತೆ ಕೇಳಿದ್ದರು. ಈ ನಿಟ್ಟಿನಲ್ಲಿ ಸಿಸಿಪಿಎ ಉಬರ್‌ಗೆ ನೋಟಿಸ್ ನೀಡಿದೆ.

<><><><>

ಈ ವರ್ಷದ ಕೈಲಾಸ ಮಾನಸ ಸರೋವರ ಯಾತ್ರೆಗೆ ಒಟ್ಟು ೭೫೦ ಯಾತ್ರಿಕರನ್ನು ಆಯ್ಕೆ ಮಾಡಲಾಗಿದೆ. ನವದೆಹಲಿಯಲ್ಲಿ ಇಂದು ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಅವರ ಸಮ್ಮುಖದಲ್ಲಿ ಆನ್‌ಲೈನ್ ಗಣಕೀಕೃತ ಡ್ರಾ ಮೂಲಕ ಯಾತ್ರಿಕರ ಆಯ್ಕೆಯನ್ನು ನಡೆಸಲಾಯಿತು. ಮುಂದಿನ ತಿಂಗಳು ೩೦ ರಂದು ಯಾತ್ರಿಕರ ಮೊದಲ ತಂಡವು ಯಾತ್ರೆಗೆ ಹೊರಡಲಿದ್ದು, ಕೊನೆಯ ತಂಡವು ಈ ವರ್ಷದ ಆಗಸ್ಟ್ ೨೫ ರಂದು ಯಾತ್ರೆಯನ್ನು ಮುಕ್ತಾಯಗೊಳಿಸಲಿದೆ. ಈ ವರ್ಷ ತಲಾ ೫೦ ಯಾತ್ರಿಕರ ಒಟ್ಟು ೧೫ ಬ್ಯಾಚ್‌ಗಳು ಕೈಲಾಸ ಮಾನಸ ಸರೋವರ ಯಾತ್ರೆಗೆ ಹೊರಡಲಿವೆ. ೧೫ ಬ್ಯಾಚ್‌ಗಳ ಪೈಕಿ ಐದು ಬ್ಯಾಚ್‌ಗಳು ಲಿಪುಲೇಖ್ ಮಾರ್ಗದಲ್ಲಿ ಮತ್ತು ೧೦ ಬ್ಯಾಚ್‌ಗಳು ನಾಥುಲಾ ಮಾರ್ಗದಲ್ಲಿ ನಡೆಯಲಿವೆ.

<><><><>

ಪಿಎಂ ಇ-ಡ್ರೈವ್ ಯೋಜನೆಯಡಿಯಲ್ಲಿ ಇವಿ ಚಾರ್ಜಿಂಗ್ ಮೂಲಸೌಕರ್ಯ ಅನುಷ್ಠಾನ ಪರಿಶೀಲನೆ ಹಾಗೂ ಅದನ್ನು ಮತ್ತಷ್ಟು ವೇಗವಾಗಿ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಕೇಂದ್ರ ಬೃಹತ್ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ, ನವದೆಹಲಿಯಲ್ಲಿ ಇಂದು ಅಂತರ ಸಚಿವಾಲಯ ಸಮನ್ವಯ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಭೂಸಾರಿಗೆ ವಲಯದಲ್ಲಿ ವಾಯು ಮಾಲಿನ್ಯವನ್ನು ಗಣನೀಯವಾಗಿ ತಗ್ಗಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷಿ ಯೋಜನೆಯಾದ ಪಿಎಂ ಇ-ಡ್ರೈವ್ ಅನುಷ್ಠಾನಕ್ಕೆ ಬಂದಿದ್ದು, ಇದನ್ನು ರಾಷ್ಟ್ರೀಯ ಮಹತ್ವದ ಯೋಜನೆ ಎಂದು ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಕಟಿಬದ್ಧವಾಗಿ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><><><>

ರಾಷ್ಟ್ರೀಯ ನಾಗರಿಕ ಸೇವೆಗಳ ಸಾಮರ್ಥ್ಯ ವೃದ್ಧಿ ಕಾರ್ಯಕ್ರಮ - ಮಿಷನ್ ಕರ್ಮಯೋಗಿ ಅಡಿಯಲ್ಲಿ ಐಜಿಒಟಿ ಕರ್ಮಯೋಗಿ ಆಪ್‌ನಲ್ಲಿ ಭಾರತಾದ್ಯಂತ ಒಂದು ಕೋಟಿ ಸರ್ಕಾರಿ ನೌಕರರು ನೋಂದಾಣಿಯಾಗಿದ್ದಾರೆ. ಇದು ಎರಡು ವರ್ಷದಲ್ಲಿ ೩೦ ಪಟ್ಟು ಹೆಚ್ಚಾಗಿದೆ.